**National**
**Kannada**
**20.04.2025 1.10 p.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

<u>ಮುಖ್ಯಾಂಶಗಳು</u>

1. ವಕ್ಫ್ ತಿದ್ದುಪಡಿ ಕಾಯ್ದೆ–2025 ಪ್ರಯೋಜನಗಳ ಕುರಿತು ಜಾಗೃತಿ ಮೂಡಿಸಲು ಬಿಜೆಪಿಯಿಂದ 'ವಕ್ಫ್ ಸುಧಾರ್ ಜನಜಾಗರಣ್ ಅಭಿಯಾನ್'
2. ಕಳೆದ ನಾಲ್ಕು ವರ್ಷಗಳಲ್ಲಿ ವಿದೇಶಿ ವಿನಿಮಯ ಮಾರುಕಟ್ಟೆ ಮೌಲ್ಯ ದ್ವಿಗುಣ– ಆರ್‌ಬಿಐ ಗವರ್ನರ್ ಸಂಜಯ್ ಮಲ್ಹೋತ್ರಾ
3. ಅಮೆರಿಕ ಉಪಾಧ್ಯಕ್ಷ ಜೆ.ಡಿ.ವ್ಯಾನ್ಸ್ ನಾಳೆಯಿಂದ ಭಾರತಕ್ಕೆ ನಾಲ್ಕು ದಿನಗಳ ಅಧಿಕೃತ ಭೇಟಿ
4. ಸ್ಕ್ವ್ಯಾಷ್ ವಿಶ್ವ ಚಾಂಪಿಯನ್‌ಶಿಪ್ ಅರ್ಹತೆ ಗಳಿಸಿದ ಭಾರತದ ವೀರ್ ಚೋತ್ರಾಣಿ
5. ಐಪಿಎಲ್ ಟಿ–20 ಕ್ರಿಕೆಟ್; ಇಂದು ರಾಯಲ್ ಚಾಲೆಂಜರ್ಸ್ ಬೆಂಗಳೂರು –ಪಂಜಾಬ್ ಕಿಂಗ್ಸ್ ಹಾಗೂ ಮುಂಬೈ ಇಂಡಿಯನ್ಸ್– ಚೆನ್ನೈ ಸೂಪರ್ ಕಿಂಗ್ಸ್ ಮುಖಾಮುಖಿ

***************

ವಕ್ಫ್ ತಿದ್ದುಪಡಿ ಕಾಯ್ದೆ–2025 ಪ್ರಯೋಜನಗಳ ಬಗ್ಗೆ ಜಾಗೃತಿ ಮೂಡಿಸಲು ಭಾರತೀಯ ಜನತಾ ಪಕ್ಷವು ಇಂದಿನಿಂದ 'ವಕ್ಫ್ ಸುಧಾರ್ ಜನಜಾಗರಣ್ ಅಭಿಯಾನ್' ಎಂಬ ರಾಷ್ಟ್ರವ್ಯಾಪಿ ಅಭಿಯಾನವನ್ನು ಪ್ರಾರಂಭಿಸುತ್ತಿದೆ. ಈ ಅಭಿಯಾನವು ಮುಂದಿನ ತಿಂಗಳ 5 ರವರೆಗೆ ಮುಂದುವರಿಯಲಿದೆ.

ಈ ಅಭಿಯಾನದಡಿ, ಬಿಜೆಪಿ ನಾಯಕರು ಮತ್ತು ಕಾರ್ಯಕರ್ತರು ಮುಸ್ಲಿಂ ಸಮುದಾಯಗಳಿಗೆ ಭೇಟಿ ನೀಡಿ, ತಿದ್ದುಪಡಿ ಮಾಡಿದ ಕಾಯ್ದೆಯ ಬಗ್ಗೆ ಅರಿವು ಮೂಡಿಸಲಿದ್ದಾರೆ.

***************

ಸುಪ್ರೀಂ ಕೋರ್ಟ್ ಹಾಗೂ ಭಾರತದ ಮುಖ್ಯ ನ್ಯಾಯಮೂರ್ತಿಗಳ ಕುರಿತು ಪಕ್ಷದ ಸಂಸದರಾದ ನಿಶಿಕಾಂತ್ ದುಬೆ ಮತ್ತು ದಿನೇಶ್ ಶರ್ಮಾ ಮಾಡಿದ ವಿವಾದಾತ್ಮಕ ಹೇಳಿಕೆಗಳನ್ನು ಸಂಪೂರ್ಣವಾಗಿ ತಿರಸ್ಕರಿಸಿ, ಅವುಗಳಿಂದ ದೂರ ಉಳಿದಿದೆ. ಸಂಸದರಿಗೆ ವಿವಾದಾತ್ಮಕ ಹೇಳಿಕೆಗಳನ್ನು ನೀಡದಂತೆ ಪಕ್ಷ ಸೂಚಿಸಿದೆ.

ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ.ನಡ್ಡಾ ಉಭಯ ಸಂಸದರು ನೀಡಿರುವಂತಹ ಹೇಳಿಕೆಗಳೊಂದಿಗೆ ಬಿಜೆಪಿ ಯಾವುದೇ ಸಂಬಂಧ ಹೊಂದಿಲ್ಲ. ಅವು ಅವರ ವೈಯಕ್ತಿಕ ಅಭಿಪ್ರಾಯಗಳಾಗಿವೆ. ಬಿಜೆಪಿ, ಅಂತಹ ಹೇಳಿಕೆಗಳನ್ನು ಒಪ್ಪುವುದೂ ಇಲ್ಲ, ಬೆಂಬಲಿಸುವುದು ಇಲ್ಲ ಎಂದಿದ್ದಾರೆ.

ಬಿಜೆಪಿ ಪಕ್ಷ ಎಂದಿಗೂ ನ್ಯಾಯಾಂಗವನ್ನು ಗೌರವಿಸುತ್ತದೆ ಮತ್ತು ಅದರ ಆದೇಶಗಳು ಹಾಗೂ ಸಲಹೆಗಳನ್ನು ಮುಕ್ತ ಮನಸ್ಸಿನಿಂದ ಸ್ವೀಕರಿಸುತ್ತದೆ ಎಂದು ಜೆ.ಪಿ.ನಡ್ಡಾ ತಿಳಿಸಿದ್ದಾರೆ.

***************

ಭಾರತದ ಹಣಕಾಸು ಮಾರುಕಟ್ಟೆಗಳು ಆರ್ಥಿಕ ಬೆಳವಣಿಗೆಗೆ ಉತ್ತೇಜನ ನೀಡುವ ಕ್ರಿಯಾತ್ಮಕ ಶಕ್ತಿಗಳಾಗಿ ಅಭಿವೃದ್ಧಿ ಹೊಂದಿದ್ದು, 2020 ರಲ್ಲಿ 32 ಶತಕೋಟಿ ಮೌಲ್ಯವಿದ್ದ ವಿದೇಶಿ ವಿನಿಮಯ ಮಾರುಕಟ್ಟೆ 2024 ರಲ್ಲಿ 60 ಶತಕೋಟಿ ಬೆಳೆದು ಬಹುತೇಕ ದ್ವಿಗುಣಗೊಂಡಿದೆ ಎಂದು ಆರ್‌ಬಿಐ ಗವರ್ನರ್ ಸಂಜಯ್ ಮಲ್ಹೋತ್ರಾ ತಿಳಿಸಿದ್ದಾರೆ.

ಬಾಲಿಯಲ್ಲಿ ನಡೆದ ವಾರ್ಷಿಕ ಸಮ್ಮೇಳನವೊಂದರಲ್ಲಿ ಮಾತನಾಡಿದ ಅವರು, ಸರ್ಕಾರಿ ಭದ್ರತೆಗಳ ಮಾರುಕಟ್ಟೆಗಳಲ್ಲಿ ಸರಾಸರಿ ದೈನಂದಿನ ಪ್ರಮಾಣ ನಾಲ್ಕು ವರ್ಷಗಳ ಅವಧಿಯಲ್ಲಿ ಶೇಕಡ 40 ರಷ್ಟು ಏರಿಕೆಯೊಂದಿಗೆ 66 ಸಾವಿರ ಕೋಟಿ ರೂಪಾಯಿಗೆ ಬೆಳೆದಿದೆ ಎಂದರು.

***************

ಅಮೆರಿಕ ಉಪಾಧ್ಯಕ್ಷ ಜೆ.ಡಿ.ವ್ಯಾನ್ಸ್ ನಾಳೆಯಿಂದ ಭಾರತಕ್ಕೆ ನಾಲ್ಕು ದಿನಗಳ ಅಧಿಕೃತ ಭೇಟಿ ಕೈಗೊಳ್ಳಲಿದ್ದಾರೆ.

ಜೆ.ಡಿ.ವ್ಯಾನ್ಸ್ ಭಾರತಕ್ಕೆ ನೀಡುತ್ತಿರುವ ಮೊದಲ ಭೇಟಿ ಇದಾಗಿದ್ದು, ಈ ವೇಳೆ ಅವರು, ಪ್ರಧಾನಿ ನರೇಂದ್ರ ಮೋದಿ ಅವರನ್ನು ಭೇಟಿ ಮಾಡಲಿದ್ದಾರೆ. ಈ ಸಂದರ್ಭದಲ್ಲಿ ದ್ವಿಪಕ್ಷೀಯ ಸಂಬಂಧಗಳ ಪ್ರಗತಿ ಮತ್ತು ಕಳೆದ ಫೆಬ್ರವರಿ 13 ರಂದು ಪ್ರಧಾನಿ ನರೇಂದ್ರ ಮೋದಿ ಅವರ ಅಮೆರಿಕ ಭೇಟಿಯ ಸಂದರ್ಭದಲ್ಲಿ ಹೊರಡಿಸಲಾದ ಭಾರತ– ಅಮೆರಿಕ ಜಂಟಿ ಹೇಳಿಕೆಯ ಫಲಿತಾಂಶಗಳ ಅನುಷ್ಠಾನದ ಕುರಿತಂತೆ ಚರ್ಚೆ ನಡೆಯಲಿದೆ.

***************

ಸ್ವಾವಲಂಬನೆಯೆಡೆಗಿನ ಮತ್ತೊಂದು ಪ್ರಮುಖ ಹೆಜ್ಜೆಯಾಗಿ ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ– ಇಸ್ರೋ, ಪಿಎಸ್ಎಲ್‌ವಿ ಉಡಾವಣಾ ವಾಹನದ ನಾಲ್ಕನೇ ಹಂತದಲ್ಲಿ ನಳಿಕೆಯ ಡೈವರ್ಜೆಂಟ್‌ಗೆ ಬಳಸಲಾಗುವ ಕೊಲಂಬಿಯಂ ವಸ್ತುವಿಗೆ ಪರ್ಯಾಯವನ್ನು ಅಭಿವೃದ್ಧಿಪಡಿಸಿದೆ.

ಆಮದು ಮಾಡಿಕೊಳ್ಳಲಾಗುವ ಕೊಲಂಬಿಯಂ ವಸ್ತುವಿನ ಬದಲಿಗೆ  ಸ್ಟೆಲ್ಲೈಟ್‌ನಿಂದ ಮಾಡಿದ ನಳಿಕೆಯ ಡೈವರ್ಜೆಂಟ್ ಅನ್ನು ಸ್ಥಳೀಯವಾಗಿ ಅಭಿವೃದ್ಧಿಪಡಿಸಲಾಗಿದೆ. ಈ ಪರ್ಯಾಯ ವಸ್ತುವು ಕ್ರೋಮಿಯಂ, ನಿಕಲ್, ಟಂಗ್‌ಸ್ಟನ್ ಮತ್ತು ಕಬ್ಬಿಣದ ಸೇರ್ಪಡೆಗಳೊಂದಿಗೆ ಕೋಬಾಲ್ಟ್ ಆಧಾರಿತ ಮಿಶ್ರಲೋಹವಾಗಿದೆ.

ಸ್ಟೆಲ್ಲೈಟ್‌ನಿಂದ ತಯಾರಿಸಿದ ನಳಿಕೆಯ ಡೈವರ್ಜೆಂಟ್‌ನಲ್ಲಿ ನಡೆಸಿದ ಪರೀಕ್ಷೆಗಳು 1 ಸಾವಿರದ 150 ಡಿಗ್ರಿ ಸೆಲ್ಸಿಯಸ್ ವರೆಗಿನ ಹೆಚ್ಚಿನ ತಾಪಮಾನವನ್ನು ತಡೆದುಕೊಳ್ಳುವ ಶಕ್ತಿ ಹೊಂದಿದೆ.

ಸ್ಥಳೀಯವಾಗಿ ಅಭಿವೃದ್ಧಿಪಡಿಸಿದ ಈ ವಸ್ತು, ಆಮದು ಮಾಡಿಕೊಳ್ಳುತ್ತಿದ್ದ ಕೊಲಂಬಿಯಂ ವಸ್ತುವಿಗೆ ಹೋಲಿಸಿದರೆ, ಶೇಕಡ 90 ರಷ್ಟು ವೆಚ್ಚವನ್ನು ತಗ್ಗಿಸಲಿದೆ.

ಮಹೇಂದ್ರಗಿರಿಯಲ್ಲಿರುವ ಇಸ್ರೋ ಸೌಲಭ್ಯದಲ್ಲಿ ಗಗನ ಯಾನ್ ಕಾರ್ಯಕ್ರಮಕ್ಕಾಗಿ ಬಳಸಬೇಕಾದ ಮಾನವ–ಶ್ರೇಣಿಯ ವಿಕಾಸ್ ಎಂಜಿನ್‌ನ ಬಿಸಿ ಪರೀಕ್ಷೆಗಳನ್ನು ಸಹ ಯಶಸ್ವಿಯಾಗಿ ನಡೆಸಲಾಗಿದೆ.

***************

17ನೇ ನಾಗರಿಕ ಸೇವೆಗಳ ದಿನದಂದು ಪ್ರಧಾನಿ ನರೇಂದ್ರ ಮೋದಿ ಅವರು ನವದೆಹಲಿಯಲ್ಲಿ ನಾಳೆ ಸರ್ಕಾರಿ ನೌಕರರನ್ನುದ್ದೇಶಿಸಿ ಮಾತನಾಡಲಿದ್ದಾರೆ. ಇದೇ ವೇಳೆ ಪ್ರಧಾನಿ, ಸಾರ್ವಜನಿಕ ಆಡಳಿತದಲ್ಲಿ ಉತ್ಕೃಷ್ಟತೆಗಾಗಿ ಪ್ರಧಾನ ಮಂತ್ರಿಗಳ ಪ್ರಶಸ್ತಿಗಳನ್ನು ಪ್ರದಾನ ಮಾಡಲಿದ್ದಾರೆ.

ಈ ವರ್ಷ, ಜಿಲ್ಲೆಗಳ ಸಮಗ್ರ ಅಭಿವೃದ್ಧಿ, ಮಹತ್ವಾಕಾಂಕ್ಷೆಯ ಬ್ಲಾಕ್‌ಗಳ ಕಾರ್ಯಕ್ರಮ ಮತ್ತು ನಾವೀನ್ಯತೆ ವಿಭಾಗಗಳಲ್ಲಿ 16 ಪ್ರಶಸ್ತಿಗಳನ್ನು ಪ್ರಧಾನಿ ಸರ್ಕಾರಿ ನೌಕರರಿಗೆ ನೀಡಲಿದ್ದಾರೆ.

***************

ವಿಶ್ವಾದ್ಯಂತ ಇಂದು ಈಸ್ಟರ್ ಹಬ್ಬವನ್ನು ಆಚರಿಸಲಾಗುತ್ತಿದೆ. ಶುಭ ಶುಕ್ರವಾರದಂದು ಶಿಲುಬೆಗೇರಿಸಿದ ನಂತರ ಮರಣಹೊಂದಿದ ಏಸು ಕ್ರಿಸ್ತರ ಪುನರುತ್ಥಾನದ ದಿನ ಇದಾಗಿದೆ.

ದೇಶಾದ್ಯಂತ ಕ್ರಿಶ್ಚಿಯನ್ ಬಾಂಧವರು ಈ ಹಬ್ಬವನ್ನು ವಿಶೇಷವಾಗಿ ಆಚರಿಸುತ್ತಿದ್ದು, ಚರ್ಚ್‌ಗಳಲ್ಲಿ ಸಾಮೂಹಿಕ ಪ್ರಾರ್ಥನೆ ಕೈಗೊಳ್ಳಲಾಗುತ್ತಿದೆ.

ಈಸ್ಟರ್ ಹಬ್ಬದ ಅಂಗವಾಗಿ ದೇಶದ ಜನತೆಗೆ ಹಾಗೂ ವಿಶೇಷವಾಗಿ ಭಾರತ ಮತ್ತು ವಿದೇಶಗಳಲ್ಲಿ ವಾಸಿಸುವ ಕ್ರಿಶ್ಚಿಯನ್ ಸಮುದಾಯಕ್ಕೆ ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ಶುಭಾಶಯ ಕೋರಿದ್ದಾರೆ.

ಭಗವಾನ್ ಯೇಸು ಕ್ರಿಸ್ತನ ಪುನರುತ್ಥಾನವನ್ನು ಸ್ಮರಿಸುವ ಪವಿತ್ರ ಈಸ್ಟರ್ ಹಬ್ಬ, ನಿಸ್ವಾರ್ಥ ಪ್ರೀತಿ ಮತ್ತು ಸೇವೆಯ ಸಂದೇಶವನ್ನು ನೀಡುತ್ತದೆ ಎಂದು ರಾಷ್ಟ್ರಪತಿಯವರು ತಮ್ಮ ಸಂದೇಶದಲ್ಲಿ ತಿಳಿಸಿದ್ದಾರೆ.

***************

ಪಶ್ಚಿಮ ಬಂಗಾಳದ ಮುರ್ಷಿದಾಬಾದ್‌ನಲ್ಲಿ ನಡೆದ ಕೋಮು ಹಿಂಸಾಚಾರದ ಘಟನೆಯನ್ನು ಮುಖ್ಯಮಂತ್ರಿ ಮಮತಾ ಬ್ಯಾನರ್ಜಿಯವರೊಂದಿಗೆ ಚರ್ಚಿಸುವುದಾಗಿ ಪಶ್ಚಿಮ ಬಂಗಾಳ ರಾಜ್ಯಪಾಲ ಸಿ.ವಿ.ಆನಂದ ಬೋಸ್ ಹೇಳಿದ್ದಾರೆ.

ಮುರ್ಷಿದಾಬಾದ್ ಭೇಟಿಯ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಅಲ್ಲಿನ ಪ್ರಸ್ತುತ ಪರಿಸ್ಥಿತಿಯ ಕುರಿತಂತೆ ತಮ್ಮ ಸಂಶೋಧನೆಗಳ ವರದಿಯನ್ನು ಕೇಂದ್ರ ಸರ್ಕಾರಕ್ಕೆ ಸಲ್ಲಿಸಲಾಗುವುದು. ಅಮಾಯಕರ ಮೇಲೆ ಅನಾಗರಿಕ ದಾಳಿ ನಡೆದಿರುವುದು ಅಲ್ಲಿನ ಸಾರ್ವಜನಿಕರಿಂದ ತಿಳಿದು ಬಂದಿದೆ. ಒಂದು ನಾಗರಿಕ ಸಮಾಜದಲ್ಲಿ ಇಂತಹ ದಾಳಿಗಳು ಸ್ವೀಕಾರಾರ್ಹವಲ್ಲ ಎಂದಿದ್ದಾರೆ.

ಧ್ವನಿ: ಸಿ.ವಿ.ಆನಂದ ಬೋಸ್ ರಾಜ್ಯಪಾಲ

***************

ಮಧ್ಯಪ್ರದೇಶದ ಕುನೊ ರಾಷ್ಟ್ರೀಯ ಉದ್ಯಾನವನದಿಂದ ಎರಡು ಚಿರತೆಗಳನ್ನು ಇಂದು ಮನ್ಸೋರ್ ಜಿಲ್ಲೆಯ ಗಾಂಧಿ ಸಾಗರ್ ವನ್ಯಜೀವಿ ಅಭಯಾರಣ್ಯಕ್ಕೆ ಸ್ಥಳಾಂತರಿಸಲಾಗುವುದು. ಚೀತಾ ಸ್ಟೀರಿಂಗ್ ಸಮಿತಿ ಮತ್ತು ರಾಷ್ಟ್ರೀಯ ಹುಲಿ ಸಂರಕ್ಷಣಾ ಪ್ರಾಧಿಕಾರದ ನಡುವಿನ ಸಭೆಯ ನಂತರ ಮುಖ್ಯಮಂತ್ರಿ ಮೋಹನ್ ಯಾದವ್ ಅವರು, ಚಿರತೆಗಳ ಸ್ಥಳಾಂತರಕ್ಕೆ ಹಸಿರು ನಿಶಾನೆ ತೋರಿದರು.

***************

ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಉಕ್ರೇನ್‌ನಲ್ಲಿ 30 ಗಂಟೆಗಳ ಈಸ್ಟರ್ ಕದನ ವಿರಾಮವನ್ನು ಘೋಷಿಸಿದ್ದಾರೆ. ಭಾರತೀಯ ಕಾಲಮಾನದ ಪ್ರಕಾರ ನಾಳೆ ಬೆಳಗಿನ ಜಾವ 2.30 ರವರೆಗೆ ಎಲ್ಲಾ ಮಿಲಿಟರಿ ಕಾರ್ಯಾಚರಣೆಯನ್ನು ಸ್ಥಗಿತಗೊಳಿಸುವಂತೆ ತಮ್ಮ ಪಡೆಗಳಿಗೆ ಪುಟಿನ್ ಆದೇಶಿಸಿದ್ದಾರೆ.

ಈ ಆದೇಶ, ಮಾನವೀಯ ದೃಷ್ಟಿಯಿಂದ ತೆಗೆದುಕೊಳ್ಳಲಾಗಿದ್ದು, ಉಕ್ರೇನ್ ಅದನ್ನು ಅನುಸರಿಸಲಿದೆ ಎಂಬ ನಿರೀಕ್ಷೆಯಿದೆ ಎಂದು ಪುಟಿನ್ ಹೇಳಿದ್ದಾರೆ.

ಈ ನಡುವೆ ರಷ್ಯಾ ನಿಜವಾಗಿಯೂ ಕದನ ವಿರಾಮವನ್ನು ಪಾಲಿಸಿದರೆ, ಉಕ್ರೇನ್ ಅದನ್ನು ಗೌರವಿಸಲಿದೆ ಎಂದು ಉಕ್ರೇನ್ ಅಧ್ಯಕ್ಷ ವೊಲಾದಿಮಿರ್ ಝುಲೆನ್ಸ್ಕಿ ಹೇಳಿದ್ದಾರೆ.

***************

ಇರಾನ್ ಪರಮಾಣು ಕಾರ್ಯಕ್ರಮದ ಕುರಿತು ಅಮೆರಿಕ ಹಾಗೂ ಇರಾನ್ ನಡುವಿನ ಎರಡನೇ ಸುತ್ತಿನ ಮಾತುಕತೆಗಳು ರೋಮ್‌ನಲ್ಲಿ ನಿನ್ನೆ ಮುಕ್ತಾಯಗೊಂಡಿವೆ.

ಈ ಕುರಿತು ಮಾತನಾಡಿರುವ ಇರಾನ್ ವಿದೇಶಾಂಗ ಸಚಿವ ಅಬ್ಬಾಸ್ ಅರಗ್ಚಿ, ಉಭಯ ರಾಷ್ಟ್ರಗಳು ಕೆಲವು ತತ್ವಗಳ ಕುರಿತಂತೆ ಒಮ್ಮತಕ್ಕೆ ಬಂದಿವೆ ಎಂದಿದ್ದಾರೆ.

ಮುಂದಿನ ಸುತ್ತಿನ ಮಾತುಕತೆಗಳು ಇದೇ 26 ರಂದು ಮಸ್ಕಟ್‌ನಲ್ಲಿ ನಡೆಯಲಿದೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ.

***************

ಮಲೇಷ್ಯಾದ ಕೌಲಾಲಂಪುರದಲ್ಲಿ ಇಂದು ನಡೆದ ವಿಶ್ವ ಸ್ಕ್ವಾಷ್ ಚಾಂಪಿಯನ್‌ಶಿಪ್ ನ ಏಷ್ಯಾ ಅರ್ಹತಾ ಸ್ಪರ್ಧೆಯ ಪುರಷರ ವಿಭಾಗದ ಫೈನಲ್‌ನಲ್ಲಿ ಭಾರತದ ವೀರ್ ಚೋತ್ರಾನಿ ಗೆಲುವು ಸಾಧಿಸಿದ್ದಾರೆ. ಈ ಮೂಲಕ ಮುಂದಿನ ತಿಂಗಳು ಅಮೆರಿಕದ ಚಿಕಾಗೊದಲ್ಲಿ ನಡೆಯಲಿರುವ ಸ್ಕ್ವಾಷ್ ವಿಶ್ವಚಾಂಪಿಯನ್‌ಶಿಪ್–2025ಕ್ಕೆ ಅರ್ಹತೆ ಗಳಿಸಿದ್ದಾರೆ.

ಇಂದು ನಡೆದ ಫೈನಲ್‌ನಲ್ಲಿ ಮಲೇಷಿಯಾದ ಅಮಿಶೇನ್ ರಾಜ್ ಚಂದ್ರನ್ ವಿರುದ್ಧ 3–0 ಅಂತರದಲ್ಲಿ ಅವರು ಗೆಲುವು ಸಾಧಿಸಿದರು. ಚೋತ್ರಾಣಿಯವರು ಈಗಾಗಲೇ ಚಾಂಪಿಯನ್‌ಶಿಪ್‌ಗೆ ಅರ್ಹತೆ ಪಡೆದಿರುವ ಭಾರತದ ರಮಿತ್ ಟಂಡನ್, ಅಭಯ್ ಸಿಂಗ್, ವೆಲವನ್ ಸೆಂಥಿಲ್ ಕುಮಾರ್ ಅವರೊಂದಿಗೆ ಪ್ರತಿಷ್ಠಿತ ಟೂರ್ನಿಯಲ್ಲಿ ಭಾಗವಹಿಸಲಿದ್ದಾರೆ.

ಚಿಕಾಗೋದಲ್ಲಿ ಮೇ 9 ರಿಂದ 17ರವರೆಗೆ ವಿಶ್ವ ಚಾಂಪಿಯನ್‌ಶಿಪ್ ನಿಗದಿಯಾಗಿದೆ.

***************

ಐಪಿಎಲ್ ಟಿ-20 ಕ್ರಿಕೆಟ್ ಪಂದ್ಯಾವಳಿಯಲ್ಲಿಂದು ಎರಡು ಪಂದ್ಯಗಳು ನಡೆಯಲಿದ್ದು, ಚಂಡೀಗಢದಲ್ಲಿ ನಡೆಯಲಿರುವ ಮೊದಲ ಪಂದ್ಯದಲ್ಲಿ, ರಾಯಲ್ ಚಾಲೆಂಜರ್ಸ್ ಬೆಂಗಳೂರು ಹಾಗೂ ಪಂಜಾಬ್ ಕಿಂಗ್ಸ್ ತಂಡಗಳು ಸೆಣಸಲಿವೆ. ಪಂದ್ಯ ಮಧ್ಯಾಹ್ನ 3:30 ಕ್ಕೆ ಆರಂಭವಾಗಲಿದೆ.

ಮುಂಬೈನಲ್ಲಿ ನಡೆಯಲಿರುವ ದಿನದ ಎರಡನೇ ಪಂದ್ಯದಲ್ಲಿ ಮುಂಬೈ ಇಂಡಿಯನ್ಸ್, ಚೆನ್ನೈ ಸೂಪರ್ ಕಿಂಗ್ಸ್ ತಂಡವನ್ನು ಎದುರಿಸಲಿದೆ. ಪಂದ್ಯ ರಾತ್ರಿ 7.30ಕ್ಕೆ ಆರಂಭವಾಗಲಿದೆ.

ಜೈಪುರದ ಸವಾಯ್ ಮಾನ್ಸಿಂಗ್ ಕ್ರೀಡಾಂಗಣದಲ್ಲಿ ನಿನ್ನೆ ರಾತ್ರಿ ನಡೆದ ಪಂದ್ಯದಲ್ಲಿ ಲಕ್ನೋ ಸೂಪರ್ ಜೈಂಟ್ಸ್ ತಂಡ, ರಾಜಸ್ಥಾನ ರಾಯಲ್ಸ್ ತಂಡವನ್ನು 2 ರನ್‌ಗಳಿಂದ ಪರಾಭಗೊಳಿಸಿತು.

***************

ಪೆರುವಿನ ಲಿಮಾದಲ್ಲಿ ನಡೆದ ಐಎಸ್‌ಎಸ್‌ಎಫ್ ಶೂಟಿಂಗ್ ವಿಶ್ವಕಪ್ 2025ರ ಪುರುಷರ 10 ಮೀಟರ್ ಏರ್‌ರೈಫಲ್ ಫೈನಲ್‌ನಲ್ಲಿ ಭಾರತದ ಅರ್ಜುನ್ ಬಬುತಾ ಬೆಳ್ಳಿ ಪದಕ ಗಳಿಸಿದ್ದಾರೆ.

ಅರ್ಜುನ್, ಫೈನಲ್‌ನಲ್ಲಿ ಚೀನಾದ ಲಿಹಾಒ ಶೆಂಗ್ ಗಿಂತ ಕೇವಲ 0.1 ಅಂಕಗಳಿಂದ ಹಿಂದುಳಿದು ಚಿನ್ನದ ಪದಕ ವಂಚಿತರಾದರು.

*******ಮುಕ್ತಾಯ********